ಕೃಷಿ ವಿಶ್ವ ವಿದ್ಯಾನಿಲಯ

ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)

ಜಿ.ಕೆ.ವಿ.ಕೆ., ಬೆಂಗಳೂರು-560065


# * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

**ದಿನಾಂಕ:** 24.11.2023

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

(ದಿನಾಂಕ **25-11-2023** ರಿಂದ **29-11-2023** ವರೆಗೆ)

| ನಿಯತಾಂಕಗಳು | 25.11.2023 | 26.11.2023 | 27.11.2023 | 28.11.2023 | 29.11.2023 |
|---|---|---|---|---|---|
| ಮಳೆ (ಮಿ ಮಿ) | 4 | 4 | 3 | 0 | 0 |
| ಗರಿಷ್ಠ ಉಷ್ಣಾಂಶ °(ಡಿ.ಸೆ. ) | 28 | 28 | 28 | 30 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 19 | 19 | 18 | 18 |
| ಮೋಡ (ಪ್ರಮಾಣ) | 7 | 7 | 7 | 4 | 4 |
| ಅರ್ದ್ರತೆ 7.20 ಬೆ (ಶೇ) | 90 | 90 | 90 | 88 | 88 |
| ಅರ್ದ್ರತೆ 2.20 ಮ (ಶೇ) | 69 | 69 | 69 | 67 | 67 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 7 | 8 | 7 | 6 | 5 |
| ಗಾಳಿಯ ದಿಕ್ಕು ( ಡಿಗ್ರಿ) | 112 | 103 | 90 | 72 | 71 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0-29.0°C** ಮತ್ತು ಕನಿಷ್ಠ **18.0-20.0°C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **88-90 %** ಇದ್ದು ಮಧ್ಯಾಹ್ನ **67-69 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **5-8** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| **ಸಾಮಾನ್ಯ** | | ➢ ಹಿಂಗಾರು ಬೆಳೆಗಳನ್ನು ಬಿತ್ತಲು ಭೂಮಿಯನ್ನು ಸಿದ್ದತೆ ಮಾಡಿಕೊಳ್ಳಿ.<br>➢ ಗೊಬ್ಬರದ ಗಿಡಗಳನ್ನು ಮತ್ತು ಕಳೆಗಿಡಗಳನ್ನು ಭೂ ಹೊದಿಕೆಯಾಗಿ ಬೆಳೆಗಳಿಕೆ ಹಾಕಿ ಇದರಿಂದ ಗೊಬ್ಬರ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ. |
| **ಮುಂಗಾರು ಬೆಳೆಗಳು** | ಮಾಗುವ ಮತ್ತು ಕಟಾವು ಹಂತ | **ಈ ಕೆಳಗಿನ ಕಡಿಮೆ ಅವಧಿ ಹಿಂಗಾರು ಬೆಳೆ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>➢ ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ-9 ಮತ್ತು ಕೆ.ಬಿ.ಎಚ್-1,<br>➢ ರಾಗಿ ತೆನೆಯನ್ನು ಕಟಾವು ಮಾಡಿ ಬಿಸಿಲು ಬಂದ ಮೇಲೆ ಒಣಗಿಸಿ ಶೇಖರಿಸಿ.<br>➢ ಹಗುರ ಮಳೆಯ ಅವಕಾಶ ಇರುವುದರಿಂದ ರಾಗಿ ಗಿಡವನ್ನು ಕಟಾವು ಮಾಡುವುದನ್ನು ಕೆಲ ದಿನಗಳ ಕಾಲ ಮುಂದೂಡಿ.<br>➢ ತೊಗರಿ ಬೆಳೆಯಲ್ಲಿ ಚೆನ್ನಾಗಿ ಬಲಿತಿರುವ ಕಾಯಿಯನ್ನು ಕಟವು ಮಾಡಿ ಬಿಸಿಲು ಬಂದ ಮೇಲೆ ಒಣಗಿಸಿ ಶೇಖರಿಸಿ. |
| **ಪಶುಸಂಗೋಪನೆ** | | ➢ ಬಿಸಿಲು, ಮಳೆ ಮತ್ತು ಬೀಸುವ ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ-ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಹಿಂಡಿ ಬೂಸವನ್ನು ಮೂರು-ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು (ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.